# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: **06** :2020-21    ದಿನಾಂಕ: 02.01.2021

## ಬಾಗಲಗುಂಟೆ ವಾರ್ಡ್-14ರ ವಾರ್ಡ್ ಸಭೆಯ ನಡವಳಿ

ದಿ.02.01.2021 ರಂದು ಬೆಳಗ್ಗೆ 11.30 ಗಂಟೆಗೆ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಹಾಜರಿದ್ದವರು:

1. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ಬಾಗಲಗುಂಟೆ ವಾರ್ಡ್ ನಂ.14
2. ಶ್ರೀ.ಮೋಹನ್, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
3. ಶ್ರೀ.ಕಮಲ್ ಗದ್ದಿಮನಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
4. ಶ್ರೀ.ಲೋಕೇಶ್ ಎಂ.ಎನ್, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಾಗಲಗುಂಟೆ
5. ಶ್ರೀ.ಜಿ.ಭೈರೇಗೌಡ, ಎ.ಎಸ್.ಐ, ಬಾಗಲಗುಂಟೆ ಪೋಲೀಸ್ ಠಾಣೆ
6. ಶ್ರೀ.ಮೂಡಲಗಿರಿಯಪ್ಪ, ಅಧ್ಯಕ್ಷರು, ಸೌಂದರ್ಯ ನಗರ ಕ್ಷೇಮಾಭಿವೃದ್ದಿ ಸಂಘ
7. ಶ್ರೀ.ಬಿ.ಟಿ.ಗೋವಿಂದರಾಜು, ಒಕ್ಕಲಿಗರ ಕ್ಷೇಮಾಭಿವೃದ್ದಿ ಸಂಘ (ರಿ), ಟಿ.ದಾಸರಹಳ್ಳಿ
8. ಶ್ರೀ.ಮುದ್ದ ಹನುಮೇಗೌಡರು ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ
9. ಶ್ರೀ.ಜಿ.ಆರ್.ವೇಣುಗೋಪಾಲ್, ಅನುಗ್ರಹ ಶನೇಶ್ವರ ದೇವಸ್ಥಾನ ಟ್ರಸ್ಟ್, ಮಂಜುನಾಥನಗರ
10. ಶ್ರೀ.ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ
11. ಶ್ರೀ.ವಿ.ರಾಮೇಗೌಡ, ಭುವನೇಶ್ವರಿನಗರ ನಾಗರೀಕ ಹಿತರಕ್ಷಣಾ ಸಮಿತಿ, ಬೆಂಗಳೂರು

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ದಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಡಿಸೆಂಬರ್ ತಿಂಗಳ ಮೂರನೇ ಶನಿವಾರದ ಸಭೆಯನ್ನು ಪ್ರಾರಂಭಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ಶ್ರೀ.ಮೂಡಲಗಿರಿಯಪ್ಪ, ಸೌಂದರ್ಯನಗರ ಕ್ಷೇಮಾಭಿವೃದ್ದಿ ಸಂಘ ಸದಸ್ಯರು, 110 ಹಳ್ಳಿ ವ್ಯಾಪ್ತಿಯಲ್ಲಿ ಬರುವ ಸಿಡೇದಹಳ್ಳಿ ಗ್ರಾಮ ಪರಿಮಿತಿಯಲ್ಲಿ ಹಲವಾರು ಕೊಳವೆ ಬಾವಿಗಳನ್ನು ದುರಸ್ಥಿಮಾಡಬೇಕಾಗಿರುವುದರಿಂದ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡಲು ತೊಂದರೆಯಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ಕೊಳವೆ ಬಾವಿ ದುರಸ್ಥಿಗೊಳಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು ಹಾಗೂ ಸೌಂದರ್ಯ ಬಡಾವಣೆಯಲ್ಲಿ ಬೀದಿ ದೀಪಗಳನ್ನು ಸ್ಥಳ ಬದಲಾವಣೆ ಮಾಡಲು ಕೋರಿದ್ದು, ಅದರಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆ ರವರಿಗೆ ಸದರಿ ವಿಷಯದ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.



Scanned by CamScanner

2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ಒಟ್ಟು ಪಾಸಿಟಿವ್ ಕೇಸ್ 2496, ಬಿಡುಗಡೆ 2150 ಹಾಗೂ ಒಟ್ಟು Active case ಪ್ರಕರಣಗಳು 225 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ರೂ.250.00 ಗಳನ್ನು ದಂಡ ವಿಧಿಸಿ ಕ್ರಮ ಜರುಗಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿ ಸಂಬಂಧಿಸಿದ ವಿಷಯಗಳ ಬಗ್ಗೆ.

ಶ್ರೀ.ಮುದ್ದಹನುಮೇಗೌಡರು ಸಿದ್ದೇಶ್ವರ ಬಡಾವಣೆಯಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಮಾಡುತ್ತಿರುವುದಿಲ್ಲವೆಂದು ಹಾಗೂ ಸದರಿ ಬಡಾವಣೆಯಲ್ಲಿ ಹೊಸದಾಗಿ ಕೊಳವೆ ಬಾವಿ ಕೊರೆಸಿ, ನೀರು ಸರಬರಾಜು ಮಾಡಬೇಕೆಂದು ಸಭೆಯಲ್ಲಿ ಪ್ರಸ್ತಾಪಿಸಿದರು. ಸದರಿ ವಿಷಯದ ಸಂಬಂಧ ನೋಡೆಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರಿಗೆ ಹಾಗೂ ವಾರ್ಡ್ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು.

4. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.

ಶ್ರೀ.ಮುದ್ದಹನುಮೇಗೌಡರು ಸಿಡೇದಹಳ್ಳಿ ಮುಖ್ಯರಸ್ತೆಯಲ್ಲಿ ಕಸದ ಬ್ಲಾಕ್‌ಸ್ಪಾಟ್ ಇದ್ದು, ಇಲ್ಲಿ ತುರ್ತಾಗಿ ಕಸವನ್ನು ತೆಗೆಯಲು ಸೂಚಿಸಿ ಹಾಗೂ ಸಿದ್ದೇಶ್ವರ ಬಡಾವಣೆ, ಬಿ.ಟಿ.ಎಸ್ ಬಡಾವಣೆ, ನಿಸರ್ಗ ಬಡಾವಣೆಯಲ್ಲಿ ಸಮರ್ಪಕವಾಗಿ ಕಸವನ್ನು ತೆಗೆಯಲು ಕೋರಿದ್ದು, ಅದರಂತೆ ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ.ಮೋಹನ್ ರವರಿಗೆ ಕ್ರಮವಹಿಸಲು ಸೂಚಿಸಲಾಯಿತು.

ಶ್ರೀ.ಮೂಡಲಗಿರಿಯಪ್ಪ ಸೌಂದರ್ಯ ಬಡಾವಣೆಯ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಹಾಕುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ನೋಡೆಲ್ ಅಧಿಕಾರಿಗಳು ಆರೋಗ್ಯ ಪರಿವೀಕ್ಷಕರಿಗೆ ಕ್ರಮವಹಿಸಲು ಸೂಚಿಸಿದರು. ಮುಂದುವರೆದು ಗುರುಪ್ರಸಾದ್, ವಲಯಾಧ್ಯಕ್ಷರು, ಲಯನ್ ಸಂಸ್ಥೆ ರವರು ಅನಧೀಕೃತವಾಗಿ ಸಾರ್ವಜನಿಕರು ರಸ್ತೆಯ ಬದಿಗಳಲ್ಲಿ ಹಾಕುತ್ತಿರುವ ಕಸದ ಸ್ಥಳಗಳನ್ನು ಗುರುತಿಸಿ ಆಯಾ ಸ್ಥಳಗಳಲ್ಲಿ ಸಿ.ಸಿ ಕ್ಯಾಮೆರಾ ಅಳವಡಿಸಿ ಕ್ರಮ ಜರುಗಿಸಲು ಸೂಚಿಸಿದರು. ಸದರಿ ವಿಷಯದ ಸಂಬಂಧ ನೋಡೆಲ್ ಅಧಿಕಾರಿಗಳು 24 ಸಂಖ್ಯೆಯ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸಲು ಅನುದಾನ ಕೋರಿ ಸಕ್ಷಮ ಪ್ರಾಧಿಕಾರಕ್ಕೆ ಪತ್ರ ಬರೆದು ಕ್ರಮ ಜರುಗಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

5.ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಹಾಗೂ ರಸ್ತೆಗುಂಡಿ ಮುಚ್ಚುವ ಬಗ್ಗೆ.

ಬಾಗಲಗುಂಟೆ ವಾರ್ಡ್ ನಂ.14ರ ಬಿ.ಟಿ.ಎಸ್ ಬಡಾವಣೆ, ಪಿ.ಕೆ ಬೇಕರಿ ರಸ್ತೆ, ಸಿದ್ದೇಶ್ವರ ಬಡಾವಣೆ ಹಾಗೂ ವಿಜಯಲಕ್ಷ್ಮಿ ಬಡಾವಣೆ ಮುಖ್ಯರಸ್ತೆಗಳಲ್ಲಿ ಹಾಗೂ ಉಳಿಕೆ ಬಡಾವಣೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಕೋರಿದ್ದು, ಅದರಂತೆ ವಾರ್ಡ್ ಅಭಿಯಂತರರಿಗೆ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚಲು ಕ್ರಮಕೈಗೊಳ್ಳಲು ಸೂಚಿಸಲಾಯಿತು.

6.ವಾರ್ಡ್ ವ್ಯಾಪ್ತಿಯಲ್ಲಿ ವಾಹನಗಳ ಸುಗಮ ಸಂಚಾರ ಮತ್ತು ವಾಹನ ನಿಲುಗಡೆಯ ಬಗ್ಗೆ.

ಶ್ರೀ.ವಿ.ರಾಮೇಗೌಡ, ಭುವನೇಶ್ವರಿನಗರದ ಹಿತರಕ್ಷಣಾ ಸಮಿತಿ ರವರು ಸಭೆಯಲ್ಲಿ ಮಾತನಾಡಿ ಭುವನೇಶ್ವರಿನಗರದ ಎಸ್.ಬಿ.ಐ ಬ್ಯಾಂಕ್ ಶಾಖೆಯ ಹತ್ತಿರ ವಾಹನ ನಿಲುಗಡೆಯಿಂದಾಗಿ ತೊಂದರೆಯಾಗುತ್ತಿರುವುದಾಗಿ ಮತ್ತು ಪೈಪ್‌ಲೈನ್ ರಸ್ತೆಯ ಉದ್ಯಾನವನದ ಇಕ್ಕೆಲಗಳಲ್ಲಿ ದ್ವಿಮುಖ ವಾಹನ ಸಂಚಾರವಿದ್ದು, ಇದರಿಂದಾಗಿ ಸಂಚಾರ ದಟ್ಟಣೆ ಉಂಟಾಗುತ್ತಿರುವುದಾಗಿ ತಿಳಿಸಿದರು. ಈ ಬಗ್ಗೆ ಪರಿಶೀಲಿಸಲು ಮತ್ತು ಸಂಬಂಧಪಟ್ಟ ಸಂಚಾರಠಾಣೆಯ ಆರಕ್ಷಕರಿಗೆ ಈ ಕುರಿತು ಮಾಹಿತಿ ನೀಡಲು ಸಹಾಯಕ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ತಿಳಿಸಿದರು.



Scanned by CamScanner

ಅಂತಿಮವಾಗಿ ನೋಡೆಲ್ ಅಧಿಕಾರಿ ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 14, ಬಾಗಲಗುಂಟೆ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

24/01/2021
**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

<u>ಅಧಿಕಾರಿಗಳ ಮಾಹಿತಿಗಾಗಿ</u>

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.



Scanned by CamScanner